# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಜಲಾನಯನ ಅಭಿವೃದ್ಧಿಯ ಮೂಲಕ ಬರಗಾಲ ತಡೆಯುವಿಕೆ ಕಾರ್ಯಕ್ರಮವನ್ನು 2019-20ನೇ ಸಾಲಿನಲ್ಲಿ ಅನುಷ್ಠಾನ ಮಾಡಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಕೃಇ 49 ಕೃಯೋಕಾ 2019, ದಿನಾಂಕ: 05.11.2019.
2. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ರವರ ಪತ್ರ ಸಂಖ್ಯೆ: ಜಅಇ/ಉಕೃನಿ/ಕೃಅ-2/ಜಅಬತ/ಅ.ಬಿ/05/2019-20 ದಿ: 25.11.2019.
3. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: FD 79 GIE 2019 dated 09.12.2019.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ, 2019-20ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಲಾಗಿರುವ "ಜಲಾನಯನ ಅಭಿವೃದ್ಧಿ ಮೂಲಕ ಬರಗಾಲ ತಡೆಯುವಿಕೆ" ಹೊಸ ಕಾರ್ಯಕ್ರಮವನ್ನು ಅನುಷ್ಠಾನ ಮಾಡಲು ಲೆಕ್ಕ ಶೀರ್ಷಿಕೆ: 4402-00-102-0-02 ರಡಿ ಒಟ್ಟು ರೂ.100.00 ಕೋಟಿ ಅನುದಾನವನ್ನು ನಿಗದಿಪಡಿಸಿ ದಿನಾಂಕ 05.11.2019 ರಂದು ಆದೇಶ ಹೊರಡಿಸಲಾಗಿತ್ತು.

ಮೇಲೆ ಓದಲಾದ (2) ರಲ್ಲಿ ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆರವರ ಪ್ರಸ್ತಾವನೆಯಲ್ಲಿ, ಜಲಾನಯನ ಅಭಿವೃದ್ಧಿ ಮೂಲಕ ಬರಗಾಲ ತಡೆಯುವಿಕೆ ಕಾರ್ಯಕ್ರಮದಡಿ ಪೂರ್ವ ಸಿದ್ಧತಾ ಹಂತದ (Preparatory Phase Activities) ಚಟುವಟಿಕೆಗಳಾದ ಸರ್ಕಾರೇತರ ಸಂಸ್ಥೆಗಳ ಆಯ್ಕೆ, ಅರಿವು ಮೂಡಿಸುವ ಕಾರ್ಯಕ್ರಮ, ಸಮುದಾಯ ಆಧಾರಿತ ಸಂಘಗಳ ರಚನೆ, ಭೂ ಸಂಪನ್ಮೂಲ ಸಮೀಕ್ಷೆ ಕೈಗೊಳ್ಳುವುದು, ನಿವ್ವಳ ಯೋಜನೆ, ಡಿಪಿಆರ್ ತಯಾರಿಕೆ, ಅರಣ್ಯ ಸಸಿಮಡಿ ಚಟುವಟಿಕೆಗಳು ಹಾಗೂ ಇತರೆ ಜಲಾನಯನ ಚುಟವಟಿಕೆಗಳನ್ನು ಪ್ರಾರಂಭಿಸಬೇಕಾಗಿರುವುದರಿಂದ ಮೊದಲ ಮತ್ತು ಎರಡನೇ ಕಂತಿನ ಅನುದಾನವಾಗಿ ರೂ.50.00 ಕೋಟಿಗಳನ್ನು ಬಿಡುಗಡೆ ಮಾಡಲು ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ರವರು ಕೋರಿರುತ್ತಾರೆ.

ಮೇಲೆ ಓದಲಾದ (3)ರ ಅನಧಿಕೃತ ಟಿಪ್ಪಣಿಯಲ್ಲಿ, 2019-20ನೇ ಸಾಲಿನ ಆಯವ್ಯಯ ಬಜೆಟ್‌ಗೆ ಸಂಬಂಧಿಸಿದಂತೆ ಪರಿಷ್ಕೃತ ಪ್ರಸ್ತಾವನೆ ತಯಾರಿಸಿದ್ದು, ಅದರನ್ವಯ ಜಲಾನಯನ ಅಭಿವೃದ್ಧಿ ಇಲಾಖೆಯ ಲೆಕ್ಕ ಶೀರ್ಷಿಕೆ: 4402-00-102-0-05 ರಡಿ ಈ ಹಿಂದೆ ಒದಗಿಸಲಾಗಿದ್ದ ರೂ.10000.00 ಲಕ್ಷ ಅನುದಾನದ ಪೈಕಿ ರೂ.7500.00 ಲಕ್ಷಗಳನ್ನು ಆರ್ಥಿಕ ಇಲಾಖೆಗೆ ಹಿಂಪಡೆದು ಸದರಿ ಕಾರ್ಯಕ್ರಮ ಅನುಷ್ಠಾನಕ್ಕಾಗಿ ರೂ.2500.00 ಲಕ್ಷಗಳನ್ನು ಜಲಾನಯನ ಅಭಿವೃದ್ಧಿ ಇಲಾಖೆಗೆ ಒದಗಿಸಿದೆ.

..2)

690
6-1-2020

ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 49 ಕೃಯೋಕಾ 2019, ಬೆಂಗಳೂರು, ದಿನಾಂಕ: 02-01-2020**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನಲೆಯಲ್ಲಿ, ಜಲಾನಯನ ಅಭಿವೃದ್ಧಿ ಮೂಲಕ ಬರಗಾಲ ತಡೆಯುವಿಕೆ ಕಾರ್ಯಕ್ರಮದಡಿ ಪೂರ್ವ ಸಿದ್ಧತಾ ಹಂತದ (Preparatory Phase Activities) ಚಟುವಟಿಕೆಗಳಾದ ಸರ್ಕಾರೇತರ ಸಂಸ್ಥೆಗಳ ಆಯ್ಕೆ, ಅರಿವು ಮೂಡಿಸುವ ಕಾರ್ಯಕ್ರಮ, ಸಮುದಾಯ ಆಧಾರಿತ ಸಂಘಗಳ ರಚನೆ, ಭೂ ಸಂಪನ್ಮೂಲ ಸಮೀಕ್ಷೆ ಕೈಗೊಳ್ಳುವುದು, ನಿವ್ವಳ ಯೋಜನೆ, ಡಿಪಿಆರ್ ತಯಾರಿಕೆ, ಅರಣ್ಯ ಸಸಿಮಡಿ ಚಟುವಟಿಕೆಗಳು ಹಾಗೂ ಇತರೆ ಜಲಾನಯನ ಚಟುವಟಿಕೆಗಳನ್ನು ಪ್ರಾರಂಭಿಸಲು ಲೆಕ್ಕ ಶೀರ್ಷಿಕೆ: 4402-00-102-0-05 ರಡಿ ರೂ.25.00 ಕೋಟಿ (ಇಪ್ಪತ್ತೈದು ಕೋಟಿ ರೂಪಾಯಿಗಳು ಮಾತ್ರ) ಗಳ ಅನುದಾನವನ್ನು ಬಿಡುಗಡೆಗೊಳಿಸಿ ಆದೇಶಿಸಿದೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಕೃಇ 95 ಆಂಆಸ 2019, ದಿನಾಂಕ: 10.12.2019 ರಂದು ನೀಡಿರುವ ಸಹಮತಿ ಮತ್ತು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 01 ಟಿಎಫ್‌ಪಿ 2019, ದಿನಾಂಕ 04.07.2019 ರಲ್ಲಿ ಸರ್ಕಾರದ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ

ಎನ್. ರಾಜೇಶ್ವರಿ 02/01/2020
(ಎನ್. ರಾಜೇಶ್ವರಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಕೃಷಿ ಇಲಾಖೆ (ಯೋಜನೆ)

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-1.
2. ಪ್ರಧಾನ ಮಹಾಲೇಖಪಾಲರು (ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-1.
3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು
4. ಆಯುಕ್ತರು / ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
5. ಆಯುಕ್ತರು / ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು
6. ಸರ್ಕಾರದ ಉಪ ಕಾರ್ಯದರ್ಶಿ ಮತ್ತು ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಇಲಾಖೆ, ಬೆಂಗಳೂರು.
7. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
9. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ., ಖನಿಜ ಭವನ, ಬೆಂಗಳೂರು
10. ಶಾಖಾ ರಕ್ಷ ಕಡತ / ಹೆಚ್ಚುವರಿ ಪ್ರತಿಗಳು.

ಪ್ರತಿಯನ್ನು ಮಾಹಿತಿಗಾಗಿ -

1. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು
2. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ-1 & 2 ರವರ ಆಪ್ತ ಸಹಾಯಕರು, ಕೃಷಿ ಇಲಾಖೆ, ಬೆಂಗಳೂರು.

*****